# ಕರ್ನಾಟಕ ವಿಧಾನ ಪರಿಷತ್ತು

(4)

ಸದಸ್ಯರ ಹೆಸರು : ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: : 906(1158)

ಉತ್ತರ ದಿನಾಂಕ : 12.03.2021

| ಕ್ರ ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಕಲಬುರಗಿ, ಬೀದರ್, ಯಾದಗಿರಿ, ರಾಯಚೂರು, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) | ಬೀದರ್, ಕಲಬುರಗಿ ಹಾಗೂ ರಾಯಚೂರು ಜಿಲ್ಲೆಗಳ ಗ್ರಾಮೀಣ ಪ್ರದೇಶಗಳಲ್ಲಿ ಬರುವ ಗ್ರಾಮಗಳಲ್ಲಿ ಪ್ರಸ್ತುತ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿರುವುದಿಲ್ಲ.<br>ಬಾಕಿ ಉಳಿದ ಜಿಲ್ಲೆಗಳಾದ ಕೊಪ್ಪಳ, ಯಾದಗಿರಿ ಹಾಗೂ ಬಳ್ಳಾರಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳ ಸಂಖ್ಯೆಯ ವಿವರಗಳನ್ನು **ಅನುಬಂಧ-1ರಲ್ಲಿ** ಲಗತ್ತಿಸಿದೆ. |
| ಆ. | ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಿಗೆ ಟ್ಯಾಂಕರ್ ಮತ್ತು ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆಯೇ; (ವಿವರ ನೀಡುವುದು) | ಕೊಪ್ಪಳ, ಯಾದಗಿರಿ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳಲ್ಲಿ ಟ್ಯಾಂಕರ್ ಹಾಗೂ ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಸರಬರಾಜು ಮಾಡಲಾಗುತ್ತಿದ್ದು, ಗ್ರಾಮಗಳ ಸಂಖ್ಯೆಯ ವಿವರಗಳನ್ನು **ಅನುಬಂಧ-1ರಲ್ಲಿ** ಲಗತ್ತಿಸಿದೆ. |
| ಇ. | ಶಾಶ್ವತವಾಗಿ ಕುಡಿಯುವ ನೀರು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | **ಕೊಪ್ಪಳ:** ಕುಷ್ಟಗಿ ಹಾಗೂ ಯಲಬುರ್ಗ ತಾಲ್ಲೂಕುಗಳಲ್ಲಿ ಕುಡಿಯುವ ನೀರಿನ ಶಾಶ್ವತ ಪರಿಹಾರಕ್ಕಾಗಿ ಡಿ.ಬಿ.ಓ.ಟಿ. ಆಧಾರಿತ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯು ಅನುಮೋದನೆಯಾಗಿ, ಪ್ರಗತಿಯಲ್ಲಿದ್ದು, ಪೂರ್ಣಗೊಳ್ಳುವ ಹಂತದಲ್ಲಿರುತ್ತದೆ. ಹಾಗೂ ಗಂಗಾವತಿ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಶಾಶ್ವತ ಪರಿಹಾರಕ್ಕಾಗಿ ಜೆ.ಜೆ.ಎಂ ಅಡಿಯಲ್ಲಿ 3 ಸಂಖ್ಯೆಯ ಹೊಸ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಂಡಿದ್ದು, ಡಿ.ಪಿ.ಆರ್ ತಯಾರಿಕಾ ಹಂತದಲ್ಲಿರುತ್ತದೆ. ಅನುದಾನದ ಲಭ್ಯತೆಯನ್ನು ಆಧರಿಸಿ ಯೋಜನೆಯನ್ನು ಕೈಗೆತ್ತಿಕೊಳ್ಳಲು ಕ್ರಮವಹಿಸಲಾಗುವುದು.<br>**ಯಾದಗಿರಿ:** ಜಲಧಾರೆ ಯೋಜನೆಯಡಿ ಯಾದಗಿರಿ ಜಿಲ್ಲೆಯ ಎಲ್ಲಾ ಜನವಸತಿಗಳಿಗೆ ಕುಡಿಯುವ ನೀರನ್ನು ಒದಗಿಸಲು ಯೋಜಿಸಲಾಗಿದ್ದು, ಪಿ.ಎಸ್.ಆರ್ ತಯಾರಿಕಾ ಹಂತದಲ್ಲಿರುತ್ತದೆ. ಅನುದಾನದ ಲಭ್ಯತೆಯನ್ನು ಆಧರಿಸಿ ಪಿ.ಎಸ್.ಆರ್‌ಗೆ ಆಡಳಿತಾತ್ಮಕ ಅನುಮೋದನೆ ದೊರೆತ ಕೂಡಲೇ ಕೆ.ಟಿ.ಪಿ.ಪಿ ನಿಯಮಾನುಸಾರ ಟೆಂಡರ್ ಕರೆದು ಕಾಮಗಾರಿಯನ್ನು ಕೈಗೊಂಡು ಜಿಲ್ಲೆಯ ಎಲ್ಲಾ ಗ್ರಾಮೀಣ ಪ್ರದೇಶಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ಕ್ರಮವಹಿಸಲಾಗುವುದು.<br>**ಬಳ್ಳಾರಿ:** ಬಳ್ಳಾರಿ ಜಿಲ್ಲೆಯ ಬಳ್ಳಾರಿ ತಾಲ್ಲೂಕಿನ ಹರಗಿನದೋಣಿ ಗ್ರಾಮದಲ್ಲಿ ಜಲಮೂಲದ ಸುಸ್ಥಿರತೆಯನ್ನು ಖಚಿತಪಡಿಸಿಕೊಂಡು ಅನುದಾನ ಲಭ್ಯತೆಯ ಅನುಸಾರ 2021-22ನೇ ಸಾಲಿನ JJM ಯೋಜನೆಯಡಿಯಲ್ಲಿ ಶಾಶ್ವತವಾಗಿ ಕುಡಿಯುವ ನೀರು ಒದಗಿಸುವ ಯೋಜನೆಯನ್ನು ಕೈಗೆತ್ತಿಕೊಳ್ಳಲು ಯೋಜಿಸಲಾಗುವುದು.<br>ಹೊಸಪೇಟೆ ತಾಲ್ಲೂಕಿನ ಕಲ್ಲಹಳ್ಳಿ ಹಾಗೂ ರಾಜಾಪುರ ಗ್ರಾಮಗಳಿಗೆ ಶಾಶ್ವತವಾಗಿ ಕುಡಿಯುವ ನೀರನ್ನು ಒದಗಿಸಲು ಈಗಾಗಲೇ DMF ಯೋಜನೆಯಡಿಯಲ್ಲಿ ಕುಡಿಯುವ ನೀರಿನ ಕಾಮಗಾರಿಯನ್ನು ತೆಗೆದುಕೊಳ್ಳಲಾಗಿದೆ. |

ಸಂ:ಗ್ರಾಕುನೀ&ನೈಇ 74 ಗ್ರಾನೀಸ (4) 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು
ಕೆ.ಎಸ್. ಈಶ್ವರಪ್ಪ

# ಅನುಬಂಧ – 1

| ಸಮಸ್ಯಾತ್ಮಕ ಗ್ರಾಮಗಳ ವಿವರ ಹಾಗೂ ಟ್ಯಾಂಕರ್ ಮತ್ತು ಖಾಸಗಿ ಕೊಳವೆ ಬಾವಿಗಳ ಮೂಲಕ ನೀರು ಸರಬರಾಜು ಮಾಡುತ್ತಿರುವ ವಿವರಗಳು | | | | | | |
|---|---|---|---|---|---|---|
| ಕ್ರ.ಸಂ. | ಜಿಲ್ಲೆ | ತಾಲ್ಲೂಕು | ಕುಡಿಯುವ ನೀರಿನ ಸಮಸ್ಯೆಯಿರುವ ಗ್ರಾಮಗಳ ಸಂಖ್ಯೆ | ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುತ್ತಿರುವ ಟ್ಯಾಂಕರ್‌ಗಳ ಸಂಖ್ಯೆ | ಬಾಡಿಗೆ ಪಡೆದ ಖಾಸಗಿ ಬೋರವೆಲ್‌ಗಳ ಸಂಖ್ಯೆ | ಷರಾ |
| 1 | ಕೊಪ್ಪಳ | ಗಂಗಾವತಿ | 1 | 0 | 1 | |
| | | ಕನಕಗಿರಿ | 3 | 0 | 3 | |
| | | ಕುಷ್ಟಗಿ | 17 | 0 | 24 | |
| | | ಯಲಬುರ್ಗಾ | 2 | 0 | 2 | |
| | | ಕುಕನೂರು | 1 | 0 | 1 | |
| | ಒಟ್ಟು | | **24** | **0** | **31** | |
| 2 | ಯಾದಗಿರಿ | ಯಾದಗಿರಿ | 1 | 0 | 1 | |
| | ಒಟ್ಟು | | **1** | **0** | **1** | |
| 3 | ಬಳ್ಳಾರಿ | ಬಳ್ಳಾರಿ | 1 | 1 | 1 | |
| | | ಹೊಸಪೇಟೆ | 2 | 0 | 2 | |
| | ಒಟ್ಟು | | **3** | **1** | **3** | |